ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿಗೆ ಬಿಡುಗಡೆ ಮಾಡುವ ಹಣದ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

390 (454) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೊಳಚೆ ನಿರ್ಮೂಲನೆ ಮಂಡಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿದ ಹಣದಲ್ಲಿ ಶಿವಮೊಗ್ಗ ಜಿಲ್ಲೆಯ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಅದರಲ್ಲಿ ಈಗ ಖರ್ಚು ಮಾಡಿರುವ ಹಾಗೂ ಖರ್ಚು ಮಾಡದೆ ಬಾಕಿ ಉಳಿದಿರುವ ಮೊತ್ತವೆಷ್ಟು ; (ಕಾಮಗಾರಿವಾರು, ವರ್ಗವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೊಳಚೆ ನಿರ್ಮೂಲನ ಮಂಡಳಿಗೆ ಸರ್ಕಾರದಿಂದ ಪ್ರತಿ ವರ್ಷ ಮಂಜೂರಾಗುವ ಮೊತ್ತವೆಷ್ಟು ; ಸದರಿ ಹಣವನ್ನು ಯಾವ ಯಾವ ಕಾಮಗಾರಿಗಳ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಲಾಗುವುದು ? (ಸಂಪೂರ್ಣವಾದ, ವಿವರವಾದ ಮಾಹಿತಿ ನೀಡುವುದು)